**Bangalore**
**Regional News**
**15.11.2024 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಹೆಚ್ಚುತ್ತಿರುವ ಆನ್‌ಲೈನ್ ವಂಚನೆ ಪ್ರಕರಣಗಳು; ಸಾರ್ವಜನಿಕರ ಜಾಗೃತಿಗಾಗಿ ಅರಿವು ಕಾರ್ಯಕ್ರಮ

೨. ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯಲ್ಲಿ ೧೨೮ ಬಸ್‌ಗಳನ್ನು ಲೋಕಾರ್ಪಣೆಗೊಳಿಸಿದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ

೩. ಉದ್ಯೋಗ ಸೃಷ್ಟಿಯಲ್ಲಿ ಸಹಕಾರ ವಲಯದ ಬ್ಯಾಂಕ್‌ಗಳ ಕೊಡುಗೆ ಅತ್ಯಮೂಲ್ಯ - ಸಚಿವ ಡಿ.ಸುಧಾಕರ್

೪. ವಿವಿಧ ಜಿಲ್ಲೆಗಳಲ್ಲಿ ಲೋಕ ಅದಾಲತ್‌ಗೆ ಸಕಲ ಸಿದ್ಧತೆ

**<><*<><>*><>**

ವಾಟ್ಸ್ ಆಪ್ ಮೂಲಕ ಮದುವೆಯ ಆಮಂತ್ರಣ ಪತ್ರಿಕೆಗಳನ್ನು ಕಳುಹಿಸಿ, ಮೊಬೈಲ್ ಹ್ಯಾಕ್ ಮಾಡುವ ಪ್ರವೃತ್ತಿ ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿದೆ. ಸಾರ್ವಜನಿಕರು ಇಂತಹ ಆಮಂತ್ರಣ ಪತ್ರಿಕೆಗಳ ಕುರಿತು ಎಚ್ಚರಿಕೆಯಿಂದ ಇರಬೇಕೆಂದು ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಮನವಿ ಮಾಡಿದ್ದಾರೆ. ಹೆಚ್ಚುತ್ತಿರುವ ಆನ್‌ಲೈನ್ ವಂಚನೆಗಳ ಕುರಿತು ಜಿಲ್ಲೆಯ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮದ ಭಾಗವಾಗಿ ಮಾಹಿತಿ ನೀಡಿರುವ ಅವರು, ವಾಟ್ಸ್ ಆಪ್ ಮೂಲಕ ಡಿಜಿಟಲ್ ಮದುವೆ ಆಮಂತ್ರಣ ಪತ್ರಿಕೆಗಳ ಹಂಚಿಕೆ ಮಾಡುತ್ತಿರುವುದು ಹೆಚ್ಚಾಗಿ ಕಂಡುಬರುತ್ತಿದ್ದು, ಈ ಆಮಂತ್ರಣ ಪತ್ರಿಕೆಗಳ ಲಿಂಕ್ ತೆರೆಯಲು ಹೋಗಿ, ಮೊಬೈಲ್ ಹ್ಯಾಕ್ ಆಗಿ, ಸಾರ್ವಜನಿಕರು ತೊಂದರೆಗಳಿಗೆ ಸಿಲುಕುತ್ತಿದ್ದಾರೆ ಎಂದು ವಿವರಿಸಿದರು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಯಾವುದೇ ಅಪರಿಚಿತ ಲಿಂಕ್‌ಗಳನ್ನು ತೆರೆಯುವ ಮುನ್ನ ಎಚ್ಚರ ವಹಿಸಬೇಕು. ಸಹಾಯಕ್ಕಾಗಿ ಹತ್ತಿರದ ಪೊಲೀಸ್ ಠಾಣೆ ಅಥವಾ ೧೯೩೦ ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಹೇಳಿದರು.

**<><*<><>*><>**

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯಲ್ಲಿ ೧೨೭ ಬಸ್‌ಗಳನ್ನು ಹುಬ್ಬಳ್ಳಿಯಲ್ಲಿಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಲೋಕಾರ್ಪಣೆ ಮಾಡಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರಿಗೆ ಸಂಸ್ಥೆಯ ಅಭಿವೃದ್ಧಿಗೆ ಮುಂದಿನ ದಿನಗಳಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು. ಪ್ರಪಂಚದಲ್ಲಿಯೇ ಲಾಭದ ದೃಷ್ಟಿಯಿಂದ ಯಾರು ಕೂಡ ಸಾರಿಗೆ ವ್ಯವಸ್ಥೆ ಮುನ್ನಡೆಸಲು ಸಾಧ್ಯವಿಲ್ಲ. ಕೆಲವು ಸಂದರ್ಭಗಳಲ್ಲಿ ನಷ್ಟವನ್ನು ಅನುಭವಿಸಲೇ ಬೇಕಾಗುತ್ತದೆ. ನಷ್ಟವನ್ನು ತಗ್ಗಿಸಲು ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದರು.

<><*<><>*><>

ಬಡತನ ನಿವಾರಣೆ ಮತ್ತು ಉದ್ಯೋಗ ಸೃಷ್ಟಿಯಲ್ಲಿ ಸಹಕಾರ ವಲಯದ ಬ್ಯಾಂಕ್‌ಗಳ ಕೊಡುಗೆ ಅತ್ಯಮೂಲ್ಯವಾಗಿದೆ ಎಂದು ಸಚಿವ, ಚಿತ್ರದುರ್ಗ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಡಿ.ಸುಧಾಕರ್ ಹೇಳಿದರು. ಚಿತ್ರದುರ್ಗದಲ್ಲಿ ಆಯೋಜಿಸಲಾದ ೭೧ನೇ ಸಹಕಾರ ಸಪ್ತಾಹ ಉದ್ಘಾಟಿಸಿ ಮಾಡನಾಡಿದ ಅವರು, ಜಿಲ್ಲೆಯ ವಿವಿಧ ಸಹಕಾರಿ ಬ್ಯಾಂಕ್‌ಗಳಿಂದ ೭೦೦ ಕೋಟಿ ಸಾಲವನ್ನು ೭೫ ಸಾವಿರ ಜನರಿಗೆ ನೀಡಲಾಗಿದೆ. ಗ್ರಾಮೀಣ ಭಾಗದ ಜನರಿಗೆ, ಕೃಷಿ ಮತ್ತು ಕೃಷಿಯೇತರ ಚಟುವಟಿಕೆಗಳಿಗೆ ಮತ್ತು ಸಣ್ಣ ಉದ್ಯಮಕ್ಕೆ ಸಾಲ ನೀಡುವ ಮೂಲಕ  ಆರ್ಥಿಕ ಶಕ್ತಿ ಹೆಚ್ಚಿಸಲು ಸಹಕಾರ ಬ್ಯಾಂಕುಗಳು ಉತ್ತಮ ಕೊಡುಗೆಯನ್ನು ನೀಡಿವೆ ಎಂದರು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಲದ ಅಧ್ಯಕ್ಷ ಜಿ.ಟಿ. ದೇವೇಗೌಡ ಸಹಕಾರ ವಾರ ಪತ್ರಿಕೆ ಬಿಡುಗಡೆ ಮಾಡಿದರು. ಅಲ್ಲದೇ, ವಿವಿಧ ಮಹಿಳಾ ಸ್ವ-ಸಹಾಯ ಸಂಘಗಳ ಉತ್ಪಾದನೆಯ ಮಳಿಗೆಗಳನ್ನು ಸಂಸದ ಗೋವಿಂದ ಕಾರಜೋಳ  ಉದ್ಘಾಟಿಸಿದರು.

<><*<><>*><>

ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೃಷಿ ವಿಜ್ಞಾನ ಕೇಂದ್ರದ ಆಶ್ರಯದಲ್ಲಿ  ಜಿಲ್ಲೆಯ ಶಿರಹಟ್ಟಿ ತಾಲೂಕಿನ ಸುಗ್ನಳ್ಳಿ ಗ್ರಾಮದ ಪ್ರಗತಿಪರ ರೈತ ಡಾ. ಬಸವರಾಜ ನಾವಿ ಅವರ ಹೊಲದಲ್ಲಿ ಬೆಂಡೆಕಾಯಿ ಬೆಳೆಯ ಕ್ಷೇತ್ರೋತ್ಸವ ಕಾರ್ಯಕ್ರಮ ಜರುಗಿತು.  ಕೃಷಿ ವಿಜ್ಞಾನ ಕೇಂದ್ರದ ಕೃಷಿ ಎಂಜಿನಿಯರಿಂಗ್ ವಿಜ್ಞಾನಿ ಡಾ. ವಿನಾಯಕ ನಿರಂಜನ್ ಮಾತನಾಡಿ, ಬೆಂಡೆಕಾಯಿ ಬೆಳೆಯಲ್ಲಿ ಅಧಿಕ ಹಾಗೂ ಗುಣಮಟ್ಟದ ಬೆಂಡೆಕಾಯಿ ಉತ್ಪಾದಕತೆಗಾಗಿ ಅರ್ಕಾ ನಿಖಿತಾ ಎಂಬ ಹೊಸ ಸಂಕರಣ ತಳಿಯನ್ನು ಪ್ರಾತ್ಯಕ್ಷಿಕೆ ಕೈಗೊಂಡ ತಾಕುಗಳಲ್ಲಿ ಸಮಗ್ರ ಬೆಳೆ ನಿರ್ವಹಣೆಯೊಂದಿಗೆ ಅಳವಡಿಸಲಾಗಿದೆ ಎಂದು ತಿಳಿಸಿದರು.  ಕೃಷಿ ವಿಜ್ಞಾನ ಕೇಂದ್ರದ ತೋಟಗಾರಿಕೆ ತಜ್ಞ ಹೇಮಾವತಿ ಹಿರೇಗೌಡರ ಮಾತನಾಡಿ, ಅರ್ಕಾ ನಿಖಿತಾ, ಒಂದು ಜೈವಿಕ ಬಲವರ್ಧಿತ ಸಂಕರಣ ತಳಿಯಾಗಿದ್ದು, ಬೇಗನೆ ಹೂವು ಬಿಟ್ಟು, ಕಾಯಿಗಳನ್ನು ಕಟ್ಟುತ್ತದೆ. ೧೩೦ ದಿನಗಳಲ್ಲಿ ಪ್ರತಿ ಎಕರೆಗೆ ೮ ರಿಂದ ೯ ಟನ್

ಇಳುವರಿಯನ್ನು ಕೊಡುವ ಸಾಮರ್ಥ್ಯ ಹೊಂದಿದ್ದು, ಬೆಂಗಳೂರಿನ ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆಯಿಂದ ಬಿಡುಗಡೆಯಾಗಿದೆ ಎಂದು ಮಾಹಿತಿ ನೀಡಿದರು. ಕ್ಷೇತ್ರೋತ್ಸವದಲ್ಲಿ ವಿವಿಧ ಗ್ರಾಮದ ಯುವಕರು ಮತ್ತು ಪ್ರಗತಿಪರ ರೈತರು ಉಪಸ್ಥಿತರಿದ್ದರು.

<><*<><>*><>

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ಡಿಸೆಂಬರ್ ೧೪ ರಂದು ಯಾದಗಿರಿ ಜಿಲ್ಲಾ ಕೇಂದ್ರ ಸೇರಿದಂತೆ ಯಾದಗಿರಿ ಜಿಲ್ಲೆಯ ಎಲ್ಲ ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ನ್ಯಾಯಾಧೀಶ ಮರಿಯಪ್ಪ ತಿಳಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ, ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಪ್ರಕರಣಗಳು ಲೋಕ ಅದಾಲತ್‌ನಲ್ಲಿ ಬಗೆಹರಿಸಿಕೊಳ್ಳಬಹುದು ಎಂದರು. ಇದೇ ರೀತಿ ಸಾಲ ವಸೂಲಾತಿ ನ್ಯಾಯಾಧೀಕರಣದ ಪ್ರಕರಣಗಳು, ಕಾಯಂ ಜನತಾ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು ಮತ್ತು ಭೂಸ್ವಾಧೀನ ಪ್ರಕರಣಗಳು ಲೋಕ ಅದಾಲತ್‌ನಲ್ಲಿ ಬಗೆಹರಿಸಿಕೊಳ್ಳಬಹುದು ಎಂದು ವಿವರಿಸಿದರು. ಸದ್ಯ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಒಟ್ಟು ೧೯ ಸಾವಿರದ ೪೯೨ ಪ್ರಕರಣಗಳು ಇದ್ದು, ಈ ಪೈಕಿ ಎರಡು ಸಾವಿರದ ೬೬೧ ಪ್ರಕರಣಗಳು ಲೋಕ ಅದಾಲತ್‌ನಲ್ಲಿ ಇತ್ಯರ್ಥ ಆಗಬಹುದಾದ ಪ್ರಕರಣಗಳು ಎಂದು ಅಂದಾಜಿಸಲಾಗಿದೆ ಎಂದು ಹೇಳಿದರು.

<><*<><>*><>

ಇದೇ ಡಿಸೆಂಬರ್ ೧೪ ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಉತ್ತರಕನ್ನಡ ಜಿಲ್ಲೆಯಲ್ಲಿ ೫ ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಜಿಲ್ಲಾ ಸಿವಿಲ್ ನ್ಯಾಯಾಧೀಶೆ ದಿವ್ಯಶ್ರೀ ಸಿ.ಎಂ. ಹೇಳಿದರು. ಕಾರವಾರದ ಜಿಲ್ಲಾ ನ್ಯಾಯಾಲಯದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪ್ರಸ್ತುತ ಜಿಲ್ಲೆಯ ನ್ಯಾಯಾಲಯದಲ್ಲಿ ಒಟ್ಟು ೩೩ ಸಾವಿರದ ೬೬೩ ಪ್ರಕರಣಗಳು ಬಾಕಿ ಇದ್ದು, ಈಗಾಗಲೇ ಇತ್ಯರ್ಥಪಡಿಸಲು ಪ್ರಸ್ತುತ ೨

ಸಾವಿರದ ೩೯೨ ಪ್ರಕರಣಗಳು ಬಾಕಿ ಇವೆ. ಇವುಗಳು ಸೇರಿದಂತೆ ಒಟ್ಟು ೫ ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದರು.

<><*<><>*><>

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಕಲ್ಪಿಸುವುದು ಮತ್ತು ಶುಲ್ಕ ರಹಿತವಾಗಿ ಸೇವೆ ನೀಡುವುದು ಕಾನೂನು ಸೇವಾ ಪ್ರಾಧಿಕಾರದ ಉದ್ದೇಶವಾಗಿದೆ ಎಂದು ಯಾದಗಿರಿ ಜಿಲ್ಲೆಯ ಸುರಪುರ ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶೆ ಫಕೀರವ್ವ ಕೆಳಗೇರಿ ಹೇಳಿದರು. ಯಾದಗಿರಿ ಜಿಲ್ಲೆಯ ಸುರಪುರ ನಗರದ ನ್ಯಾಯಾಲಯದಲ್ಲಿ ಏರ್ಪಡಿಸಿದ್ದ ಕಾನೂನು ಸೇವೆಗಳ ದಿನಾಚರಣೆ ಮತ್ತು ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನದ ಆಶಯದಂತೆ ತಮ್ಮ ಹಕ್ಕುಗಳನ್ನು ರಕ್ಷಿಸಿಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ. ಕಾನೂನಿನ ಮುಂದೆ ಎಲ್ಲರೂ ಸಮಾನರು. ಅರ್ಹರಿಗೆ ಉಚಿತವಾಗಿ ಕಾನೂನು ನೆರವು ನೀಡಲು ತಾಲೂಕು, ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಕಾನೂನು ಸೇವಾ ಉಪ ಸಮಿತಿಗಳನ್ನು ರಚಿಸಲಾಗಿದೆ ಎಂದರು.  ಹೆಚ್ಚುವರಿ ಸಿವಿಲ್ ನ್ಯಾಯಾಧೀಶ ಬಸವರಾಜ ಮಾತನಾಡಿ, ಪ್ರತಿಯೊಬ್ಬರೂ ಸಮಾನತೆ ಹಾಗೂ ಸ್ವಾಭಿಮಾನದಿಂದ ತಲೆ ಎತ್ತಿ ಬದುಕಲು ಕಾನೂನಿನಲ್ಲಿ ಅವಕಾಶ ನೀಡಲಾಗಿದೆ. ದುರ್ಬಲ ವರ್ಗದ ಜನರು, ಪರಿಶಿಷ್ಟ ಜಾತಿ ಪಂಗಡದವರು, ಮಹಿಳೆಯರು, ಮಕ್ಕಳು ಸೇರಿದಂತೆ ೩ ಲಕ್ಷ ರೂಪಾಯಿಗಿಂತ ಕಡಿಮೆ ಆದಾಯ ಇರುವವರು ಉಚಿತ ಕಾನೂನು ನೆರವು ಪಡೆದುಕೊಳ್ಳಬಹುದು ಎಂದು ಮಾಹಿತಿ ನೀಡಿದರು.

<><*<><>*><>

ಜೀವನಶೈಲಿ ಬದಲಾವಣೆ ಮೂಲಕ ಮಧುಮೇಹ ನಿಯಂತ್ರಿಸಬಹುದು ಎಂದು ಸಿಮ್ಸ್ ನಿರ್ದೇಶಕ ಡಾ. ವಿರುಪಾಕ್ಷಪ್ಪ ಹೇಳಿದ್ದಾರೆ. ಶಿವಮೊಗ್ಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಎನ್‌ಸಿಡಿ ಘಟಕ ವತಿಯಿಂದ ಸಿಮ್ಸ್ ವೈದ್ಯಕೀಯ ಕಾಲೇಜಿನ ಎನ್‌ಸಿಡಿ ಆವರಣದಲ್ಲಿ ವಿಶ್ವ ಮಧುಮೇಹ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿರು.   ಜಿಲ್ಲಾ ವೈದ್ಯಾಧಿಕಾರಿ ಡಾ.ನಟರಾಜ್ ಮಾತನಾಡಿ, ಮಧುಮೇಹದಿಂದ ಕಿಡ್ನಿ ವೈಫಲ್ಯ, ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು, ನರಗಳಿಗೆ ಹಾನಿಯಾಗುವುದು ಸೇರಿದಂತೆ ಅನೇಕ ಕಾಯಿಲೆಗಳಿಗೆ ಮಧುಮೇಹ ಕಾರಣವಾಗುತ್ತದೆ ಎಂದರು. ಮಧುಮೇಹ ನಿಯಂತ್ರಿಸಲು ಪ್ರತಿನಿತ್ಯ ದೈಹಿಕ ಚಟುವಟಿಕೆ, ಆರೋಗ್ಯಕರ ಆಹಾರ ಸೇವನೆ, ತಾಜಾ ಹಣ್ಣು, ತರಕಾರಿ, ಧಾನ್ಯಗಳನ್ನು ಹೆಚ್ಚಾಗಿ ಸೇವಿಸುವುದು ಮತ್ತು ಮದ್ಯಪಾನ ತ್ಯಜಿಸುವುದು, ದಿನನಿತ್ಯ

ನಿಗದಿತ ಚಿಕಿತ್ಸೆ ಪಾಲನೆ, ನಿಯಮಿತ ರಕ್ತದ ಸಕ್ಕರೆ ಪರೀಕ್ಷೆ ಮಾಡಿಸುವ ಮೂಲಕ ಆರೋಗ್ಯವನ್ನು ರಕ್ಷಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಕುಂದಾಣ ಹೋಬಳಿಯ ಜಾಲಿಗೆ ಗ್ರಾಮ ಪಂಚಾಯತಿ ಆವರಣದಲ್ಲಿ ಓದುವ ಬೆಳಕು ಕಾರ್ಯಕ್ರಮದಡಿ ಮಕ್ಕಳ ಪಂಚಾಯತ್ ಅರಿವಿನ ಹಬ್ಬ ಮತ್ತು ಮಕ್ಕಳ ಗ್ರಾಮ ಸಭೆ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಜಾಲಿಗೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯತಿ ಕೈಗೊಳ್ಳುವ ಕಾಮಗಾರಿಗಳು ಮತ್ತು ಅಭಿವೃದ್ಧಿ ಕಾರ್ಯಗಳ ಬಗ್ಗೆ ಸಮಗ್ರ ಮಾಹಿತಿಯನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಮಕ್ಕಳ ಪರಿಸ್ಥಿತಿಯನ್ನು ತಳಮಟ್ಟದಲ್ಲಿಯೇ ಅರಿತು, ಅತ್ಯವಶ್ಯಕ ಸುಧಾರಣಾ ಕಾರ್ಯಕ್ರಮಗಳನ್ನು ಕೈಗೊಳ್ಳುವುದು, ಮಕ್ಕಳ ವಿಶೇಷ ಗ್ರಾಮ ಸಭೆಯ ಉದ್ದೇಶವಾಗಿದೆ ಎಂದು ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**